## 9. ಲಿಖಿತ ಪರೀಕ್ಷೆ:

ಎ) **ಅಭ್ಯರ್ಥಿಯು ಸಹಿಷ್ಣುತೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ ಮಾತ್ರ ಲಿಖಿತ ಪರೀಕ್ಷೆಗೆ ಕರೆಯಲಾಗುವುದು.** ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ಸಂಬಂಧಪಟ್ಟ ಘಟಕಗಳ ಕೇಂದ್ರಗಳಲ್ಲಿ ಮಾತ್ರ ನಡೆಸಲಾಗುವುದು. ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಪರೀಕ್ಷೆಯ ದಿನಾಂಕವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ನೀಡಲಾಗುವುದು. **ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್‌ನ್ನು ದಿನ ನಿತ್ಯ ನೋಡಲು ತಿಳಿಸಲಾಗಿದೆ.**

ಬಿ) **ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸಿರುವುದರಿಂದ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಹೊಂದಿರುವ ಪ್ರವೇಶ ಕರೆ ಪತ್ರವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ,** ಆದ್ದರಿಂದ ಲಿಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನಿಂದ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು (Download). ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನ್ನು ದಿನನಿತ್ಯ ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು

i) ಪಾಸ್‌ಪೋರ್ಟ್ (Passport)

ii) ಚಾಲನಾ ಪರವಾನಗಿ ಪತ್ರ (Driving License)

iii) ಪ್ಯಾನ್ ಕಾರ್ಡ್ (PAN Card)

iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)

v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)

vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)

vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)

viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen's pension book/pension payment order)

ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)

x) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

xi) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.( AADHAR CARD).

ಸಿ) ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲೆಗಳು i) ಲಿಖಿತ ಪರೀಕ್ಷೆಯ ಕರೆಪತ್ರ, ii) ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಯ ಫಲಿತಾಂಶ ಹಾಳೆ, iii) ಗುರುತಿನ ಚೀಟಿ, iv) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು. ತಪ್ಪಿದ್ದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

ಡಿ) ನಾಗರಿಕ ಪೊಲೀಸ್ ಕಾನ್‌ಸ್ಟೇಬಲ್ (ಪುರುಷ ಮತ್ತು ಮಹಿಳಾ) ಹುದ್ದೆಗಳಿಗೆ ಸಂಬಂಧಿಸಿದಂತೆ ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ 100 ಅಂಕಗಳಿಗೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿದ್ದು, ಬಹುವಿಧ ಆಯ್ಕೆ (Multiple choice) ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಸಾಮಾನ್ಯ ಜ್ಞಾನ, ವಿಜ್ಞಾನ, ಭೂಗೋಳ, ಇತಿಹಾಸ, ಭಾರತದ ಸಂವಿಧಾನ, ಭಾರತದ ಸ್ವಾತಂತ್ರ್ಯ ಸಂಗ್ರಾಮ, ಸಾಮಾನ್ಯ ಮಾನಸಿಕ ಸಾಮರ್ಥ್ಯ ಮತ್ತು ನೀತಿ ಶಿಕ್ಷಣ ಇತ್ಯಾದಿಗಳ ಬಗ್ಗೆ ಪ್ರಶ್ನೆಗಳು ಇರುತ್ತವೆ. ಪ್ರತಿ ಸರಿ ಉತ್ತರಕ್ಕೆ 1.00 ಅಂಕವನ್ನು ನೀಡಲಾಗುವುದು ಮತ್ತು ತಪ್ಪು ಉತ್ತರಕ್ಕೆ 0.25 ಅಂಕವನ್ನು ಕಳೆಯಲಾಗುವುದು. ಪರೀಕ್ಷೆಯ ಅವಧಿಯು ಒಂದೂವರೆ ಗಂಟೆಯದ್ದಾಗಿರುತ್ತದೆ.

ಇ) ಅಭ್ಯರ್ಥಿಗಳು ಈ ವಸ್ತುನಿಷ್ಠ ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಮತ್ತು ಅವರು ಅರ್ಹತಾ (Qualifying) ಪರೀಕ್ಷೆಯಲ್ಲಿ ಪಡೆದ ಶೇಕಡಾ ಅಂಕಗಳನ್ನೂ ಕೂಡಿಸಿ ಅದರ ಆಧಾರದ ಮೇಲೆ ಅರ್ಹತಾ ಪಟ್ಟಿಯನ್ನು ತಯಾರಿಸಲಾಗುವುದು. ಈ ಅರ್ಹತಾ ಪಟ್ಟಿಯಿಂದ ಪ್ರತಿ ವರ್ಗದಲ್ಲಿ ಅಧಿಸೂಚಿತ ಖಾಲಿ ಇರುವ ಹುದ್ದೆಗಳಿಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು 1:1 ರ ಪ್ರಮಾಣದಲ್ಲಿ ಪ್ರಕಟಿಸಲಾಗುವುದು. ಮಾಜಿ ಸೈನಿಕ ಅಭ್ಯರ್ಥಿಗಳು ಪಿ.ಯು.ಸಿ./ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರದೆ ಕೇವಲ ಸೇನೆಯಿಂದ ನೀಡುವ ವಿದ್ಯಾರ್ಹತೆ ಪ್ರಮಾಣ ಪತ್ರ ಹೊಂದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅರ್ಹತಾ ಪರೀಕ್ಷೆಯ ಅಂಕಗಳನ್ನು ಶೂನ್ಯ ಎಂದು ಪರಿಗಣಿಸಿ ಕೇವಲ ಲಿಖಿತ ಪರೀಕ್ಷೆಯ ಅಂಕಗಳನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು. ನಂತರ ಮೂಲ ದಾಖಲೆಗಳ ಪರಿಶೀಲನೆ ಮಾಡಿ ವೈದ್ಯಕೀಯ ಪರೀಕ್ಷೆಗೆ ಕರೆಯಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಯ ಸಂದರ್ಭದಲ್ಲಿ ಗೆಜೆಟೆಡ್ ಅಧಿಕಾರಿಯವರಿಂದ ದೃಢೀಕೃತ ಜೆರಾಕ್ಸ್ ಪ್ರತಿಯ ಒಂದು ಸೆಟ್‌ಅನ್ನು ಸಂಬಂಧಪಟ್ಟ ಕಛೇರಿಗೆ ನೀಡುವುದು.

ಎಫ್) **<u>ಸೂಚನೆ:</u>**

i) ಅ) ಪ್ರಶ್ನೆ ಪತ್ರಿಕೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿರುತ್ತದೆ.

ಆ) ಪ್ರಶ್ನೆ ಪತ್ರಿಕೆಯ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ **ಕಪ್ಪು/ನೀಲಿ** ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ನಿಗದಿತ ಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ (ಎ,ಬಿ,ಸಿ ಇತ್ಯಾದಿ) ಹಾಗೂ ಅಭ್ಯರ್ಥಿಯ ಅರ್ಜಿ ಸಂಖ್ಯೆ. ರೋಲ್ ನಂಬರ್ ಮತ್ತು ಸಹಿಯನ್ನು ತಪ್ಪದೇ ನಮೂದು ಮಾಡಬೇಕು. ಇದನ್ನು ತುಂಬದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿ ಆಯ್ಕೆಗೆ ಅನರ್ಹನಾಗುತ್ತಾರೆ. ಆದ್ದರಿಂದ ಅಭ್ಯರ್ಥಿಯು ಸರಿಯಾಗಿ ಮೇಲಿನ ಮಾಹಿತಿ/ವಿವರಗಳನ್ನು ಕಡ್ಡಾಯವಾಗಿ ಗುರುತಿಸಬೇಕು.

ಇ) ಅಭ್ಯರ್ಥಿಗಳು ಅರ್ಜಿ ಸಂಖ್ಯೆ. ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗದಿತ ಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

ಈ) ಅರ್ಜಿ ಸಂಖ್ಯೆ, ರೋಲ್ ನಂಬರ್ ಪ್ರಶ್ನೆ ಪತ್ರಿಕೆ ಶ್ರೇಣಿ ಇತ್ಯಾದಿಗಳನ್ನು ಒ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಭರ್ತಿ ಮಾಡದೆ ಪರೀಕ್ಷೆ ಮುಗಿದ ನಂತರ ಅದನ್ನು ಪರಿಗಣಿಸುವಂತೆ ಕೋರಿದಲ್ಲಿ ಅಂತಹ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

ii) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯಲ್ಲಿ ಅರ್ಜಿ ಸಂಖ್ಯೆ, ನೊಂದಣಿ ಸಂಖ್ಯೆ, ಪ್ರಶ್ನೆ ಪತ್ರಿಕೆ ಶ್ರೇಣಿ, ಸಹಿ, ಎಡಗೈ ಹೆಬ್ಬೆಟ್ಟಿನ ಭರ್ತಿ/ಗುರುತು ಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

iii) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ, ಅಥವಾ ನಕಲು ಮಾಡಿದ್ದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

iv) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಮೊಬೈಲ್ ಫೋನುಗಳನ್ನು ಅಭ್ಯರ್ಥಿಗಳು ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

v) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇದಿಸಲಾಗಿದೆ.

vi) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಅವರ ಹೆಸರು, ವಿಳಾಸ, ನೋಂದಣಿ ಸಂಖ್ಯೆ. ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ನೇಮಕಾತಿ ಸಮಿತಿಗೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ದೋಷ ಕಂಡು ಬಂದಲ್ಲಿ ಅದನ್ನು ತಕ್ಷಣ ಮೇಲ್ವಿಚಾರಕರ ಗಮನಕ್ಕೆ ತಂದು ಅದನ್ನು ಸರಿಪಡಿಸಿಕೊಳ್ಳಬೇಕು. ಪರೀಕ್ಷೆ ಮುಗಿದ ನಂತರ ಅದರ ಬಗ್ಗೆ ನೇಮಕಾತಿ ಸಮಿತಿಯ ಗಮನಕ್ಕೆ ತಂದರೆ ಅಂತಹ ಆಕ್ಷೇಪಣೆಗಳನ್ನು ಗಣನೆಗೆ ತೆಗೆದುಕೊಳ್ಳುವುದಿಲ್ಲ.

**<u>ಟಿಪ್ಪಣಿ:–</u>** ನಿಗದಿಪಡಿಸಿರುವ ಕೊನೆಯ ದಿನಾಂಕವಾದ 28.07.2015 ಕ್ಕೆ ಮುಂಚಿತವಾಗಿ ಅಭ್ಯರ್ಥಿಗಳು ಕೋರುವ ಮೀಸಲಾತಿಗಳ ದಾಖಲೆಗಳನ್ನು ಪಡೆದಿಟ್ಟುಕೊಂಡಿರಬೇಕು.